ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: www.kptcl.com
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521

(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)

ಸಂಖ್ಯೆ: ಕವಿಪ್ರನಿನಿ/ಬಿ66/88875/2017-18 ದಿನಾಂಕ: 14 FEB 2019

## ಸುತ್ತೋಲೆ

ವಿಷಯ: ಇಲಾಖಾ ಪರೀಕ್ಷಾ ಕಾರ್ಯಗಳಿಗೆ ನಿಯೋಜಿಸಲ್ಪಡುವ ಅಧಿಕಾರಿಗಳು ಕಡ್ಡಾಯವಾಗಿ ಕರ್ತವ್ಯಕ್ಕೆ ಹಾಜರಾಗುವ ಬಗ್ಗೆ.

*****

ನಿಗಮ ಮತ್ತು ವಿವಿಧ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಲವು ಪದವೃಂದದ ನೌಕರರು/ಅಧಿಕಾರಿಗಳಿಗೆ ಕವಿಪ್ರನಿನಿ ವತಿಯಿಂದ ಇಲಾಖಾ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ. ಇಲಾಖಾ ಪರೀಕ್ಷೆಗಳು ನೌಕರರು/ಅಧಿಕಾರಿಗಳ ಪರೀಕ್ಷಾರ್ಥ ಅವಧಿ ಘೋಷಣೆ ಹಾಗೂ ಪದೋನ್ನತಿಗಳಿಗೆ ಅತ್ಯವಶ್ಯಕವಾಗಿರುತ್ತವೆ. ಆದ್ದರಿಂದ ನಿಗದಿತ ಸಮಯದೊಳಗೆ ಇಲಾಖಾ ಪರೀಕ್ಷೆಗಳನ್ನು ನಡೆಸಿ ಫಲಿತಾಂಶವನ್ನು ನೀಡುವುದು ನಿಗಮದ ಕರ್ತವ್ಯವಾಗಿರುತ್ತದೆ. ಇಲಾಖಾ ಪರೀಕ್ಷೆಗಳ ವಿವಿಧ ಹಂತಗಳ ಕೆಲಸ ಕಾರ್ಯಗಳಿಗಾಗಿ ಕವಿಪ್ರನಿನಿ ಮತ್ತು ವಿವಿಧ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ಸೇವೆಯನ್ನು ಪಡೆಯಲಾಗುತ್ತಿದೆ. ಇಲಾಖಾ ಪರೀಕ್ಷೆಯ ಕೆಲಸ ಕಾರ್ಯಗಳಿಗೆ ನಿಯೋಜಿಸಲ್ಪಡುವ ಅಧಿಕಾರಿಗಳು ಸದರಿ ಕೆಲಸ ಕಾರ್ಯಗಳು ತಮ್ಮ ಕರ್ತವ್ಯಗಳ ಒಂದು ಭಾಗವೆಂದು ಪರಿಗಣಿಸಿ ನಿಗಮವು ವಹಿಸುವ ಪರೀಕ್ಷಾ ಕಾರ್ಯ ಚಟುವಟಿಕೆಗಳನ್ನು ನಿರ್ವಹಿಸಬೇಕಿರುತ್ತದೆ.

ಆದರೆ, ಇತ್ತೀಚೆಗೆ ಇಲಾಖಾ ಪರೀಕ್ಷೆಗಳ ಕೆಲಸ ಕಾರ್ಯಗಳನ್ನು ನಿರ್ವಹಿಸಲು ಹಾಜರಾಗುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಪತ್ರಗಳನ್ನು ಬರೆದಾಗ್ಯೂ, ಹಲವಾರು ಅಧಿಕಾರಿಗಳು ವೈಯಕ್ತಿಕ ಕಾರಣಗಳನ್ನು ನೀಡಿ ಪರೀಕ್ಷಾ ಕೆಲಸ ಕಾರ್ಯಗಳಿಗೆ ಹಾಜರಾಗದೆ ನಿಗಮದ ಆದೇಶವನ್ನು ನಿರ್ಲಕ್ಷಿಸುತ್ತಿರುವುದು ಹಾಗೂ ಕೆಲವು ಸಕ್ಷಮ ಪ್ರಾಧಿಕಾರಿಗಳು ಪರೀಕ್ಷಾ ಕೆಲಸ ಕಾರ್ಯಗಳಿಗೆ ನಿಯೋಜಿಸಲ್ಪಟ್ಟ ಅಧಿಕಾರಿಗಳನ್ನು ಕಾರ್ಯವಿಮುಕ್ತಿಗೊಳಿಸದೆ ಇರುವುದನ್ನು ನಿಗಮವು ಗಂಭೀರವಾಗಿ ಪರಿಗಣಿಸಿದೆ. ಇದು ನಿಗಮದ ಆದೇಶದ ಸ್ಪಷ್ಟ ಉಲ್ಲಂಘನೆಯಾಗಿರುತ್ತದೆ. ಇದರಿಂದ ಪರೀಕ್ಷಾ ಕೆಲಸ ಕಾರ್ಯಗಳಿಗೆ ಅಡಚಣೆ ಉಂಟಾಗುತ್ತಿದ್ದು, ನಿಗದಿತ ಸಮಯದೊಳಗೆ ಪರೀಕ್ಷೆಗಳನ್ನು ನಡೆಸಿ ಫಲಿತಾಂಶವನ್ನು ನೀಡಲು ವಿಳಂಬವಾಗುತ್ತಿದೆ ಹಾಗೂ ನೌಕರರು/ಅಧಿಕಾರಿಗಳ ಪರೀಕ್ಷಾರ್ಥ ಅವಧಿ ಘೋಷಣೆ ಹಾಗೂ ಪದೋನ್ನತಿಗಳಿಗೆ ತೊಂದರೆ ಉಂಟಾಗುತ್ತಿದೆ.

ಆದುದರಿಂದ, ಇನ್ನು ಮುಂದೆ ಇಲಾಖಾ ಪರೀಕ್ಷಾ ಕೆಲಸ ಕಾರ್ಯಗಳು ಸುಗಮವಾಗಿ ನಡೆಯಲು ಅನುಕೂಲವಾಗುವಂತೆ ಪರೀಕ್ಷಾ ಕಾರ್ಯಗಳಿಗೆ ನಿಯೋಜಿಸಲ್ಪಡುವ ಅಧಿಕಾರಿಗಳು ತಪ್ಪದೆ ಸದರಿ ಕೆಲಸ ಕಾರ್ಯಗಳಿಗೆ ಹಾಜರಾಗುವಂತೆ ಹಾಗೂ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಿಗಳು ತಮ್ಮ ಅಧಿಕಾರ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳನ್ನು ಕಡ್ಡಾಯವಾಗಿ ಕಾರ್ಯವಿಮುಕ್ತಿಗೊಳಿಸಿ ಪರೀಕ್ಷಾ ಕೆಲಸ ಕಾರ್ಯಗಳಿಗೆ ನಿಗದಿತ ಸಮಯದಲ್ಲಿ ಕಳುಹಿಸಿಕೊಡುವಂತೆ ಹಾಗೂ ಇದನ್ನು ಅತಿ ಗಂಭೀರವೆಂದು ಪರಿಗಣಿಸಿ

ಕ್ರಮವಹಿಸಲು ಸೂಚಿಸಿದೆ. ಇನ್ನು ಮುಂದೆ ಪರೀಕ್ಷಾ ಕೆಲಸ ಕಾರ್ಯಗಳಿಗೆ ಹಾಜರಾಗದ ಅಧಿಕಾರಿಗಳು ಹಾಗೂ ಅಧಿಕಾರಿಗಳನ್ನು ಕಾರ್ಯವಿಮುಕ್ತಿಗೊಳಿಸದ ಸಕ್ಷಮ ಪ್ರಾಧಿಕಾರಿಗಳ ವಿರುದ್ಧ ಸೂಕ್ತ ಶಿಸ್ತು ಕ್ರಮ ಜರುಗಿಸಲಾಗುವುದು.

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

ಪ್ರತಿಯನ್ನು ಮಾಹಿತಿಗಾಗಿ:

1. ಎಲ್ಲಾ ವ್ಯವಸ್ಥಾಪಕ ನಿರ್ದೇಶಕರು, ಎಸ್ಕಾಂ/ಪಿಸಿಕೆಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂ/ನಿರ್ದೇಶಕರು(ಹಣಕಾಸು), ಬೆವಿಕಂ.
3. ಎಲ್ಲಾ ಪ್ರಧಾನ ವ್ಯವಸ್ಥಾಪಕರು, ಎಸ್ಕಾಂ.
4. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂ.
5. ಎಲ್ಲಾ ಮುಖ್ಯ ಇಂಜನಿಯರ್, ಕವಿಪ್ರನಿನಿ/ಎಸ್ಕಾಂ.
6. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/(ಹಣಕಾಸು)/(ಆಡಳಿತ ಮತ್ತು ಮಾ.ಸಂ)/ ನಿರ್ದೇಶಕರು ಮತ್ತು ಕಂಪನಿ ಕಾರ್ಯದರ್ಶಿ, ಕವಿಪ್ರನಿನಿ ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.

ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ www.kptcl.com-->eprasarna ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

7. ಎಲ್ಲಾ ಅಧೀಕ್ಷಕ ಇಂಜನಿಯರ್(ವಿ)/ನಿಯಂತ್ರಣಾಧಿಕಾರಿ, ಕವಿಪ್ರನಿನಿ/ಎಸ್ಕಾಂ.
8. ಎಲ್ಲಾ ಕಾರ್ಯನಿರ್ವಾಹಕ ಇಂಜನಿಯರ್(ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿ, ಕವಿಪ್ರನಿನಿ/ಎಸ್ಕಾಂ.
9. ಎಲ್ಲಾ ಲೆಕ್ಕಾಧಿಕಾರಿಗಳು(ಆಂ.ಪ), ಕವಿಪ್ರನಿನಿ/ಎಸ್ಕಾಂ.
10. ಕ್ರೋಢೀಕರಣ ಘಟಕ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

ಪ್ರತಿಗಳನ್ನು ಮಾಹಿತಿಗಾಗಿ:

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ(659) ಹಾಗೂ ನಿರ್ದೇಶಕರು, ಕವಿಪ್ರನಿನಿ/ಎಸ್ಕಾಂಗಳು.
2. ಶ್ರೀ.ಎ.ಎಸ್.ಜಯರಾಜ್, ಅಧ್ಯಕ್ಷರು, ಕವಿಮಂ ಇಂಜನಿಯರ್‌ಗಳ ಸಂಘ ಹಾಗೂ ನಿರ್ದೇಶಕರು, ಕವಿಪ್ರನಿನಿ/ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ, ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೋಮ ಇಂಜನಿಯರುಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂಗಳ ಪಂಗಡ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಧಿಕಾರಿಗಳ ಸಂಘ, ಬೆಂಗಳೂರು.